ಪೋಲೆಂಡ್ ಪ್ರಧಾನ ಮಂತ್ರಿಗಳ ಭಾರತ ಭೇಟಿ (ಅಕ್ಟೋಬರ್ 21-23, 2026)

ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ, ಪೋಲೆಂಡ್ ಗಣರಾಜ್ಯದ ಪ್ರಧಾನ ಮಂತ್ರಿ ಗೌರವಾನ್ವಿತ ಶ್ರೀ ಡೊನಾಲ್ಡ್ ಟಸ್ಕ್ ಅವರು 2026 ರ ಅಕ್ಟೋಬರ್ 21-23 ರವರೆಗೆ ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಪ್ರಧಾನ ಮಂತ್ರಿ ಡೊನಾಲ್ಡ್ ಟಸ್ಕ್ ಅವರೊಂದಿಗೆ, ಹಣಕಾಸು ಮತ್ತು ಆರ್ಥಿಕ ಸಚಿವ ಶ್ರೀ ಆ್ಯಂಡ್ರೆಜ್ ಡೊಮಾನ್ಸ್ಕಿ ಹಾಗೂ ಉದ್ಯಮ ವಲಯದ ದೊಡ್ಡ ನಿಯೋಗವೂ ಆಗಮಿಸಲಿದೆ. ಇದು ಪೋಲೆಂಡ್‌ನ ಪ್ರಧಾನ ಮಂತ್ರಿಯಾಗಿ ಟಸ್ಕ್ ಅವರ ಎರಡನೇ ಭಾರತ ಭೇಟಿಯಾಗಲಿದೆ. 2010 ರಲ್ಲಿ ತಮ್ಮ ಹಿಂದಿನ ಅಧಿಕಾರಾವಧಿಯಲ್ಲಿ ಅವರು ಭಾರತಕ್ಕೆ ಮೊದಲ ಬಾರಿಗೆ ಭೇಟಿ ನೀಡಿದ್ದರು. ಪ್ರಧಾನಿ ಟಸ್ಕ್ ಅವರು ಯುರೋಪಿಯನ್ ಕೌನ್ಸಿಲ್ ಅಧ್ಯಕ್ಷರಾಗಿ, ಭಾರತ-ಇಯು ಶೃಂಗಸಭೆ ನಿಮಿತ್ತ 2017 ರಲ್ಲಿ ನವದೆಹಲಿಗೆ ಭೇಟಿ ನೀಡಿದ್ದರು.

2. ಪ್ರಧಾನ ಮಂತ್ರಿ ಟಸ್ಕ್ ಅವರು 2026 ರ ಅಕ್ಟೋಬರ್ 22 ರಂದು ಪ್ರಧಾನಿ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಆಗಸ್ಟ್ 2024 ರಲ್ಲಿ ಪ್ರಧಾನಿ ಮೋದಿ ಅವರ ಪೋಲೆಂಡ್ ಭೇಟಿಯ ಸಂದರ್ಭದಲ್ಲಿ ಕಾರ್ಯತಂತ್ರದ ಪಾಲುದಾರಿಕೆ ಮಟ್ಟಕ್ಕೆ ಏರಿಸಲಾದ ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಉಭಯ ನಾಯಕರು ಈ ವೇಳೆ ಪರಿಶೀಲಿಸಲಿದ್ದಾರೆ. ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ಕೂಡಾ ವಿನಿಮಯ ಮಾಡಿಕೊಳ್ಳಲಿದ್ದಾರೆ. ಪ್ರಧಾನಿ ಡೊನಾಲ್ಡ್ ಟಸ್ಕ್ ಅವರು ಬೆಂಗಳೂರಿಗೆ ಭೇಟಿ ನೀಡಲಿದ್ದು, ಐಟಿ ಮತ್ತು ಬಾಹ್ಯಾಕಾಶ ವಲಯಗಳನ್ನು ಒಳಗೊಂಡಂತೆ ವಿವಿಧ ವ್ಯಾಪಾರ ಪಾಲುದಾರರೊಂದಿಗೆ ಚರ್ಚೆ ನಡೆಸಲಿದ್ದಾರೆ. ಭಾರತ-ಪೋಲೆಂಡ್ ಬಿಸಿನೆಸ್ ವೇದಿಕೆಯನ್ನು ಅಕ್ಟೋಬರ್ 22 ರಂದು ನವದೆಹಲಿಯಲ್ಲಿ ಮತ್ತು ಅಕ್ಟೋಬರ್ 23 ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿದೆ.

3. ಈ ಭೇಟಿಯು ಭಾರತ-ಪೋಲೆಂಡ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಹಾಗೂ ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ, ಉದಯೋನ್ಮುಖ ತಂತ್ರಜ್ಞಾನಗಳು, ನವೀಕರಿಸಬಹುದಾದ ಇಂಧನ, ಶಿಕ್ಷಣ, ಸಂಸ್ಕೃತಿ ಮತ್ತು ಜನರ ನಡುವಿನ ಸಂಬಂಧಗಳನ್ನು ಒಳಗೊಂಡಂತೆ ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ಮುನ್ನಡೆಸಲು ಅವಕಾಶವನ್ನು ಒದಗಿಸುತ್ತದೆ. ಇದು ಭಾರತ-ಇಯು ಕಾರ್ಯತಂತ್ರದ ಪಾಲುದಾರಿಕೆಯನ್ನು ಆಳಗೊಳಿಸಲು ಸಹಾಯ ಮಾಡುತ್ತದೆ.

ನವದೆಹಲಿ

ಅಕ್ಟೋಬರ್ 19, 2026